# <u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.</u>

ಸಿ.ಸಿ. ನಂಃ 164/2015 ಸಿಡಬ್ಲೂ: 3 ಪಿಡಬ್ಲೂ: 2

ಪ್ರಮಾಣವಚನ ಬೋಧಿಸಲಾಯಿತು ದಿಃ 27-11-2024

ಹೆಸರು : ರಿಯಾಜುದ್ದಿನ್

ತಂದೆ ಹೆಸರು : ಲಲ್ಲು ಮೀಯ ಹಕುಮ್

ವಯಸ್ಸು : 29 ವರ್ಷ

ಉದ್ಯೋಗ : ಒಕ್ಕಲುತನ

ವಾಸಸ್ಥಳ : ಸೇಡಂ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾಸಾ 1 ಮತ್ತು 2 ರವರು ನನಗೆ ಪರಿಚಯವಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇರುವುದಿಲ್ಲ. ಪೋಲೀಸರು ನಮ್ಮ ಸಮಕ್ಷಮ ಯಾವುದೇ ರೀತಿಯ ಪಂಚನಾಮೆಗಳು ಮಾಡಿರುವುದಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ನೆ ಸ್ಥಳದ ಪಂಚನಾಮೆ ಆಗಿದ್ದು, ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಆದರೇ ನಿಪಿ-2 ರಲ್ಲಿರುವ ವಿಷಯಗಳು ನನಗೆ ಗೊತ್ತಿರುವುದಿಲ್ಲ. ಅದೇ ರೀತಿ ಪೋಲೀಸರು ನನ್ನ ಸಮಕ್ಷಮ ಯಾವುದೇ ರೀತಿಯ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**<u>ಪಾಟೀಸವಾಲುಃ</u>** ಮಾನ್ಯ ಸ.ಸ.ಅ ರವರಿಂದ:

ದಿಃ25-08-2014 ರಂದು ಸಂಜೆ 04-00 ರಿಂದ 05-00 ಗಂಟೆಯವರೆಗೆ ಚಾಸಾ 1 ರವರು ತೋರಿಸಿದ ಗುನ್ನೆ ಸ್ಥಳದಲ್ಲಿ ಪೋಲೀಸರು ನನ್ನ ಹಾಗು ಚಾಸಾ 2 ರವರ ಸಮಕ್ಷಮ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-1 ರಲ್ಲಿರುವ ವಿಷಯಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲೀಸರು ಪಂಚನಾಮೆಯ ಅವಧಿಯಲ್ಲಿ ಒಂದು ಹಿಡಿ ಗಾತ್ರದ ಒಂದು ಫೀಟು ಉದ್ದದ ಹೊಣಗಿದ ತೊಗರಿ

ಬೇಳೆಯನ್ನು ವಶಕ್ಕೆ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಿಲ್ಲ. ಅದನ್ನು ಈಗಾಗಲೆ ಮು ಮಾ -1 ಎಂದು ಗುರುತಿಸಲಾಗಿದೆ.

**ಪಾಟೀಸವಾಲು:** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆ: ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**